ಪಂಚಾಯತ್ ಜಿಲ್ಲಾ ಖಜಾನೆಯಿಂದ ಹಣ ಡ್ರಾ ಮಾಡಿರುತ್ತವೆ.

4. ಈಗಾಗಲೇ ಉತ್ತರಿಸಲಾಗಿದೆ.

ಗ್ರಾಮೀಣ ಅಭಿವೃದ್ಧಿ ಇಲಾಖೆಗೆ ಕಳೆದ 2 ವರ್ಷಗಳಲ್ಲಿ ಒದಗಿಸಿರುವ ಅನುದಾನ.

1812(2602)

ಶ್ರೀ ಜಗದೀಶ್ ಶೆಟ್ಟರ್(ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣ ಅಭಿವೃದ್ಧಿ ಇಲಾಖೆಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಮೊತ್ತವೆಷ್ಟು? (ವರ್ಷವಾರು ವಿವರ ನೀಡುವುದು)

ಆ. ಈ ಅನುದಾನದಲ್ಲಿ ಖರ್ಚು ಮಾಡಿರುವ ಹಣದ ಮೊತ್ತವೆಷ್ಟು: (ವರ್ಷವಾರು ವಿವರ ನೀಡುವುದು)

ಇ. ಗ್ರಾಮೀಣಾಭಿವೃದ್ಧಿ ಇಲಾಖೆಯ ಆಯವ್ಯಯದಲ್ಲಿ ಒದಗಿಸಿದ್ದ ಸಂಪೂರ್ಣ ಹಣವನ್ನು ಖರ್ಚು ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಇದಕ್ಕೆ ಕಾರಣವೇನು?

ಈ. ಹಾಗಿದ್ದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹಣ ಖರ್ಚಾಗದೆ ಉಳಿದಿದೆ (ವರ್ಷವಾರು ವಿವರ ನೀಡುವುದು)

ಉ. ಅನುದಾನ ಬಿಡುಗಡೆಯಾಗಿದ್ದರೂ ಖರ್ಚು ಮಾಡದೆ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಲು ಕಾರಣವಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ. ಕಳೆದ ಮೂರು ವರ್ಷಗಳಲ್ಲಿ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ವಿವರಗಳು ಈ ಕೆಳಕಂಡಂತಿವೆ (ಯೋಜನೆ ಮತ್ತು ಯೋಜನೇತರ ಸೇರಿ)

(ರೂ. ಕೋಟಗಳಲ್ಲಿ)

ವರ್ಷ	ಒದಗಿಸಿರುವ ಅನುದಾನ
1998-1999	1259.32
1999-2000	1414.42
2000-2001	1335.46

ಆ. ಕಳೆದ ಮೂರು ವರ್ಷಗಳಲ್ಲಿ ಖರ್ಚು ಮಾಡಿರುವ ಹಣದ ವಿವರಗಳು.

(ರೂ.ಕೋಟಗಳಲ್ಲಿ)

ವರ್ಷ	ಖರ್ಚು ಮಾಡಿರುವ ಮೊತ್ತ
1998-1999	1223.46
1999-2000	1263.09
2000-2001	1207.83

ಇ. ಕೇಂದ್ರ ಸರ್ಕಾರವು ಕೇಂದ್ರ ಪುರಸ್ಕೃತ ಯೋಜನೆಗಳಡಿಯಲ್ಲಿ ನಿಗಧಿ ಪಡಿಸಿದಂತೆ ಅನುದಾನ ಬಿಡುಗಡೆ ಮಾಡುವುದು. ಹಣಕಾಸು ವರ್ಷದ ಕೊನೆಯಲ್ಲಿ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಿದಾಗ ವಿಶೇಷವಾಗಿ ಕುಡಿಯುವ ನೀರಿನ ಯೋಜನೆಗಳಿಗೆ ಹಣ ಬಿಡುಗಡೆ ಮಾಡಿದಾಗ ಅದಕ್ಕೆ ಸಮಾನವಾಗಿ ರಾಜ್ಯದ ಪಾಲಿನ ಅನುದಾನವನ್ನು ಅದೇ ಸಮಯದಲ್ಲಿ ಬಿಡುಗಡೆ ಮಾಡುವುದರಿಂದ ಉಳಿತಾಯವಾಗುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಬಾಕಿ ಉಳಿದಿರುವ ಅನುದಾನವನ್ನು ಮುಂದಿನ ವರ್ಷದಲ್ಲಿ ಉಪಯೋಗಿಸಬಹುದಾಗಿರುತ್ತದೆ.

ಕೇಂದ್ರ ಸರ್ಕಾರವು ದಿನಾಂಕ 1-4-99 ರಿಂದ ಅನ್ವಯವಾಗುವಂತೆ ಐ.ಆರ್.ಡಿ.ಪಿ, ಟ್ರೈಸಂ, ಗ್ರಾಮೀಣ ಪ್ರದೇಶಗಳಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಸುಧಾರಿತ ಆಧುನಿಕ ಉಪಕರಣಗಳ ಪೂರೈಕೆ. ದಶಲಕ್ಷ ಬಾವಿ ಯೋಜನೆ ಮತ್ತು ಗಂಗಾಕಲ್ಯಾಣ ಯೋಜನೆಗಳನ್ನು ಒಂದುಗೂಡಿಸಿ ಹೊಸ ಯೋಜನೆಯಾದ ಸ್ವರ್ಣ ಜಯಂತಿ ಸ್ವರೋಜ್‌ಗಾರ್ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಆದುದರಿಂದ

1999-2000ನೇ ಸಾಲಿನಲ್ಲಿ ಮೇಲ್ಕಂಡ ಯೋಜನೆಗಳಿಗೆ ಒದಗಿಸಿದ ಅನುದಾನ ಉಳಿತಾಯವಾಗಿರುತ್ತದೆ.

(ರೂ.ಕೋಟಿಗಳಲ್ಲಿ)

ವರ್ಷ	ಖರ್ಚಾಗದೆ ಉಳಿದಿರುವ ಮೊತ್ತ
1998-1999	35.86
1999-2000	151.33
2000-2001	127.63

ಉ. ಕ್ರಮಸಂಖ್ಯೆ 'ಇ'ನಲ್ಲಿ ತಿಳಿಸಿರುವ ಕಾರಣಗಳಿಂದಾಗಿ ಪೂರ್ತಿ ಹಣವನ್ನು ಉಪಯೋಗಿಸಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಗ್ರಾಮೀಣ ನೀರು ಸರಬರಾಜು, ರಸ್ತೆ ಮತ್ತು ಸೇತುವೆಗಳು, ಹಾಗೂ ಇತರೆ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಖರ್ಚಾಗದೆ ಉಳಿದಿರುವ ಮೊತ್ತವನ್ನು ಉಪಯೋಗಿಸಿಕೊಳ್ಳಲು ಸರ್ಕಾರದಿಂದ ಅವಧಿ ವಿಸ್ತರಿಸಿ ಅನುಮತಿಯನ್ನು ನೀಡಲಾಗಿದೆ.

ಬ್ರಹ್ಮಾವರ ಮತ ಕ್ಷೇತ್ರದಲ್ಲಿ ಶಾಲಾ ಕೊಠಡಿಗಳ ನಿರ್ಮಾಣ.

1814(1815)

ಶ್ರೀ ಜಯಪ್ರಕಾಶ್ ಹೆಗಡೆ(ಬ್ರಹ್ಮಾವರ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಕಳೆದ ಮೂರು ವರ್ಷಗಳಲ್ಲಿ ಬ್ರಹ್ಮಾವರ ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಶಾಲಾ ಕೊಠಡಿಗಳನ್ನು ನಿರ್ಮಿಸಲಾಗಿದೆ.(ಗ್ರಾಮವಾರು ಶಾಲಾ ಕೊಠಡಿಗಳ ವಿವರ ನೀಡುವುದು);

ಆ. ಅಪೂರ್ಣಗೊಂಡಿರುವ ಕೊಠಡಿಗಳ ಸಂಖ್ಯೆ ಎಷ್ಟು? ಅವುಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಣ ಸಚಿವರು):